# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 316

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್ ( ವಿಧಾನ ಸಭೆಯಿಂದ ಚುನಾಯಿತಾದವರು)

ಉತ್ತರಿಸುವ ದಿನಾಂಕ : 23.09.2020

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಎಕರೆ ಕೃಷಿ ಭೂಮಿಗಳಲ್ಲಿ ಸ್ಥಗಿತಗೊಂಡಿದೆ (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ 2016-17ನೇ ಸಾಲಿನಲ್ಲಿ 3857990 ಎಕರೆ, 2017-18 ನೇ ಸಾಲಿನಲ್ಲಿ 3758428 ಎಕರೆ ಮತ್ತು 2018-19 ನೇ ಸಾಲಿನಲ್ಲಿ 2357581 ಎಕರೆ ರಾಜ್ಯದ ಒಟ್ಟು ಬೇಸಾಯದ ಬೀಳು ಭೂಮಿ (Current Fallow Land) ಆಗಿರುವ ಜಿಲ್ಲಾವಾರು ವಿವರವನ್ನು ಅನುಬಂಧ-1ರಲ್ಲಿ ನೀಡಿದೆ. |
| ಆ) | ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ರೈತರು ವ್ಯವಸಾಯ ಮಾಡುವುದನ್ನು ನಿಲ್ಲಿಸಿರುತ್ತಾರೆ. ಇದಕ್ಕೆ ಕಾರಣವೇನು; ವ್ಯವಸಾಯ ಸ್ಥಗಿತಗೊಳಿಸಿದ ರೈತರು ಪುನಃ ವ್ಯವಸಾಯ ಆರಂಭಿಸುವಂತೆ ಮಾಡಲು ಸರ್ಕಾರ ಯಾವ ರೀತಿಯ ಪ್ರೋತ್ಸಾಹ ನೀಡುತ್ತಿದೆ; (ವಿವರ ನೀಡುವುದು) | ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ರೈತರು ವ್ಯವಸಾಯ ಮಾಡುವುದನ್ನು ನಿಲ್ಲಿಸಿರುವ ಬಗ್ಗೆ ಕೃಷಿ ಇಲಾಖೆಯಲ್ಲಿ ಯಾವುದೇ ವರದಿ ಇರುವುದಿಲ್ಲ. ವ್ಯವಸಾಯ ಸ್ಥಗಿತಗೊಳಿಸಿದ ರೈತರು ಪುನಃ ವ್ಯವಸಾಯ ಆರಂಭಿಸುವಂತೆ ಮಾಡಲು ಕೃಷಿ ಇಲಾಖೆಯಿಂದ ರೈತರಿಗೆ ಯಾವುದೇ ಪ್ರತ್ಯೇಕ ಕಾರ್ಯಕ್ರಮಗಳು ಇರುವುದಿಲ್ಲ. ಕೃಷಿ ಇಲಾಖೆಯಿಂದ ರೈತರಿಗೆ ವಿವಿಧ ಯೋಜನೆಗಳಡಿ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು ಅನುಬಂಧ-2ರಲ್ಲಿ ನೀಡಿದೆ. |
| ಇ) | ವಿದ್ಯಾವಂತ ಯುವ ಜನತೆ ಹೆಚ್ಚು ಹೆಚ್ಚಾಗಿ ಕೃಷಿಯತ್ತ ಹೊರಳುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ವಿದ್ಯಾವಂತ ಯುವ ಜನತೆ ಹೆಚ್ಚು ಹೆಚ್ಚಾಗಿ ಕೃಷಿಯತ್ತ ಹೊರಳುವಂತೆ ಮಾಡಲು ಕೃಷಿ ಇಲಾಖೆಯಿಂದ ರೂಪಿಸಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-3ರಲ್ಲಿ ನೀಡಿದೆ. |

ಸಂಖ್ಯೆ: AGRI-AML-166/2020

(ಬಿ.ಸಿ.ಪಾಟೀಲ್)
ಕೃಷಿ ಸಚಿವರು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 316 ರ ಅನುಬಂಧ–1

ಕಳೆದ ಮೂರು ವರ್ಷಗಳ ಚಾಲ್ತಿ ಬೀಳು ಪ್ರದೇಶ **(CURRENT FALLOW)**

ವಿಸ್ತೀರ್ಣ : ಎಕರೆಗಳಲ್ಲಿ

| ಕ್ರ.ಸಂ | ಜಿಲ್ಲೆಗಳ ಹೆಸರು | 2016-17 | 2017-18 | 2018-19 |
|---|---|---|---|---|
| 1 | ಬಾಗಲಕೋಟೆ | 95333 | 85012 | 14359 |
| 2 | ಬೆಂಗಳೂರು ನಗರ | 59147 | 62036 | 42114 |
| 3 | ಬೆಂಗಳೂರು( ಗ್ರಾ) | 52871 | 52238 | 45900 |
| 4 | ಬೆಳಗಾವಿ | 313525 | 450332 | 175012 |
| 5 | ಬಳ್ಳಾರಿ | 186204 | 189406 | 68428 |
| 6 | ಬೀದರ್ | 68876 | 90361 | 168128 |
| 7 | ವಿಜಯಪುರ | 182010 | 180565 | 54356 |
| 8 | ಚಾಮರಾಜನಗರ | 171847 | 121714 | 134186 |
| 9 | ಚಿಕ್ಕಬಳ್ಳಾಪುರ | 19679 | 23873 | 59216 |
| 10 | ಚಿಕ್ಕಮಗಳೂರು | 58423 | 58423 | 57151 |
| 11 | ಚಿತ್ರದುರ್ಗ | 192300 | 167723 | 192957 |
| 12 | ದಕ್ಷಿಣ ಕನ್ನಡ | 17831 | 15669 | 8315 |
| 13 | ದಾವಣಗೆರೆ | 65619 | 167950 | 18194 |
| 14 | ಧಾರವಾಡ | 43300 | 106789 | 68705 |
| 15 | ಗದಗ | 64882 | 70556 | 60931 |
| 16 | ಕಲಬುರ್ಗಿ | 141619 | 100241 | 75046 |
| 17 | ಹಾಸನ | 180338 | 113063 | 47723 |
| 18 | ಹಾವೇರಿ | 45695 | 36900 | 11130 |
| 19 | ಕೊಡಗು | 21083 | 22034 | 4492 |
| 20 | ಕೋಲಾರ | 133484 | 133585 | 49994 |
| 21 | ಕೊಪ್ಪಳ | 76128 | 46812 | 33246 |
| 22 | ಮಂಡ್ಯ | 216919 | 165348 | 70939 |
| 23 | ಮೈಸೂರು | 188015 | 62036 | 124830 |
| 24 | ರಾಯಚೂರು | 459228 | 452954 | 197437 |
| 25 | ರಾಮನಗರ | 65799 | 58151 | 65745 |

| | | | | |
|---|---|---|---|---|
| 26 | ಶಿವಮೊಗ್ಗ | 24555 | 25934 | 27528 |
| 27 | ತುಮಕೂರು | 518484 | 522383 | 404203 |
| 28 | ಉಡುಪಿ | 8421 | 6936 | 2217 |
| 29 | ಉತ್ತರ ಕನ್ನಡ | 17653 | 17132 | 14693 |
| 30 | ಯಾದಗಿರಿ | 168721 | 152271 | 60405 |
| | ಒಟ್ಟು | **3857990** | **3758428** | **2357581** |

ಮೂಲ : ವಾರ್ಷಿಕ ಋತು ಮತ್ತು ಬೆಳೆ ಅಂಕಿಅಂಶಗಳ ವರದಿ, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ.

**ವಿಧಾನ ಪರಿಷತ್ತಿನ ಪ್ರಶ್ನೆ ಸಂಖ್ಯೆ 316ರ ಅನುಬಂಧ-2**

**ಕೃಷಿ ಇಲಾಖೆಯ ವಿವಿಧ ಯೋಜನೆಗಳಡಿ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳು**

1) **ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ:** ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು, ನೀರು ಹರಿಸುವ ಪೈಪು, ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಲ್ಲಿ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತದೆ.

2) **ಬಿತ್ತನೆ ಬೀಜಗಳ ಪೂರೈಕೆ:** ಈ ಯೋಜನೆಯಡಿ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು

3) **ಸಸ್ಯ ಸಂರಕ್ಷಣೆ:** ವೈಜ್ಞಾನಿಕ ಧಾನ್ಯ ಸಂಗ್ರಹಣೆಗಾಗಿ ಸುಧಾರಿತ ಪೆಟ್ಟಿಗೆಗಳು, ಜೈವಿಕ ಪೀಡೆನಾಶಕಗಳು, ಸಸ್ಯ ಸಂರಕ್ಷಣಾ ಔಷಧಿಗಳು ಮತ್ತು ಉಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನವನ್ನು ನೀಡಲಾಗುತ್ತಿದೆ.

4) **ಮಣ್ಣಿನ ಸತ್ವ ಹೆಚ್ಚಿಸುವಿಕೆ :** ಮಣ್ಣಿನ ಫಲವತ್ತತೆ ಮತ್ತು ಬೆಳೆ ಉತ್ಪಾದಕತೆಯನ್ನು ಹೆಚ್ಚಿಸಲು ಜೈವಿಕ ಗೊಬ್ಬರಗಳು, ಲಘುಪೋಷಕಾಂಶಗಳು, ಜಿಪ್ಸಂ, ಕೃಷಿ ಸುಣ್ಣ/ಡೋಲೋಮೈಟ್, ಹಸಿರೆಲೆ ಗೊಬ್ಬರ ಬೀಜ, ಎರೆಹುಳು ಗೊಬ್ಬರ, ಸಾವಯವ ಗೊಬ್ಬರಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನದಡಿ ನೀಡುವುದರ ಜೊತೆಗೆ ಬಯೋಡೈಜೆಸ್ಟರ್ ಘಟಕ ಮತ್ತು ಎರೆಹುಳು ಗೊಬ್ಬರ ಉತ್ಪಾದನೆ ಘಟಕ ಸ್ಥಾಪನೆಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನವನ್ನು ನೀಡಲಾಗುತ್ತಿದೆ

5) **ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ :** ಈ ಕಾರ್ಯಕ್ರಮದಡಿ ರೈತರಿಗೆ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಸಸ್ಯ ಸಂರಕ್ಷಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ತ್ಯಾಜ್ಯ ನಿರ್ವಹಣಾ ಉಪಕರಣಗಳು, ಡೀಸಲ್ ಪಂಪ್‌ಸೆಟ್, ಕಬ್ಬು ಕಟಾವು ಯಂತ್ರ, ಕೊಯ್ಲು ಮತ್ತು ಕೊಯ್ಲಿನೋತ್ತರ ಸಂಸ್ಕರಣಾ ಉಪಕರಣಗಳು, ಕೃಷಿ ಸಂಸ್ಕರಣಾ ಉಪಕರಣಗಳು ಮತ್ತು ಟಾರ್ಪಾಲೀನ್ ಗಳನ್ನು ಸಹಾಯಧನದಡಿ ಒದಗಿಸಲಾಗುತ್ತಿದೆ. ಸಾಮಾನ್ಯ ವರ್ಗದ ರೈತರಿಗೆ ಶೇ.50 ರಷ್ಟು ಸಹಾಯಧನ ಹಾಗೂ ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ವರ್ಗದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಠ ರೂ.1.00ಲಕ್ಷದ ಮಿತಿಯೊಳಗೆ ನೀಡಲಾಗುತ್ತದೆ. 25ಹೆಚ್ ಪಿ ಸಣ್ಣ ಟ್ರ್ಯಾಕ್ಟರ್ (Upto 25HP PTO) ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ. 0.75 ಲಕ್ಷ ಸಹಾಯಧನ ಹಾಗೂ ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ವರ್ಗದ ರೈತರಿಗೆ ರೂ.3.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ

6) **ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ :** ಈ ಯೋಜನೆಯಡಿ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಕೇಂದ್ರ ಸರ್ಕಾರದ ಕೃಷಿ ಯಾಂತ್ರೀಕರಣ ಉಪ ಅಭಿಯಾನದಡಿ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಸಸ್ಯ ಸಂರಕ್ಷಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ತ್ಯಾಜ್ಯ ನಿರ್ವಹಣಾ ಉಪಕರಣಗಳು, ಡೀಸಲ್ ಪಂಪ್‌ಸೆಟ್,

ಕಬ್ಬು ಕಟಾವು ಯಂತ್ರ, ಕೊಯ್ಲು ಮತ್ತು ಕೊಯ್ಲೋತ್ತರ ಸಂಸ್ಕರಣಾ ಉಪಕರಣಗಳಿಗೆ ಕೇಂದ್ರ ಸರ್ಕಾರವು ನೀಡುವ ಶೇ.50ರ ಸಹಾಯಧನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಶೇ.40ರ ಸಹಾಯಧನ ಸೇರಿಸಿ ಒಟ್ಟು ಶೇ.90 ರಷ್ಟು ಸಹಾಯಧನವನ್ನು ನೀಡಲಾಗುವುದು

7) **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ಈ ಯೋಜನೆಯಡಿ ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಹಾಗೂ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.

8) **ಸಾವಯವ ಕೃಷಿ:** ಸಾವಯವ ಭಾಗ್ಯ ಯೋಜನೆಯಡಿ ಸಾವಯವ ಕೃಷಿ ಪದ್ಧತಿಗೆ ಅಳವಡಿಸಿರುವ ಪ್ರದೇಶವನ್ನು ಸಾವಯವ ಗುಂಪು ಪ್ರಮಾಣೀಕರಣಕ್ಕೆ ಒಳಪಡಿಸಲು ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನಾ ಸಂಸ್ಥೆ ಮೂಲಕ ಪ್ರಮಾಣಿಕರಣ ಪ್ರದೇಶಕ್ಕನುಗುಣವಾಗಿ ಸಹಾಯಧನ ನೀಡಲಾಗುವುದು.

9) **ರೈತ ಸಿರಿ:** ಈ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ ಕಳೆದ ಸಾಲಿನ ಬಾಕಿ ಪಾವತಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

10) **ಮಣ್ಣು ಆರೋಗ್ಯ ಕಾರ್ಯಕ್ರಮ:** ಮಣ್ಣು ಆರೋಗ್ಯ ಚೀಟಿ ಶಿಫಾರಸ್ಸಿನ ಅನ್ವಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ರಿಯಾಯಿತಿ ದರದಲ್ಲಿ ರಸಗೊಬ್ಬರ, ಸಾವಯವ ಗೊಬ್ಬರ, ಜೈವಿಕ ಗೊಬ್ಬರ, ಲಘುಪೋಷಕಾಂಶ ಮಣ್ಣು ಸುಧಾರಕಗಳನ್ನು ಗರಿಷ್ಟ ರೂ.2500/-(ಒಂದು ಹೇಕ್ಟೇರಿಗೆ) ಸಹಾಯಧನ ನೀಡಲಾಗುತ್ತದೆ. ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮೊದಲು ಮಾದರಿ ಗ್ರಾಮಗಳಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದೆ. ಇದಲ್ಲದೆ, ಗ್ರಾಮ ಮಟ್ಟದ ಮಣ್ಣು ಪರೀಕ್ಷಾ ಘಟಕಗಳನ್ನು ಸ್ಥಾಪಿಸಲು ಶೇ.75ರ ಸಹಾಯಧನ (ರೂ.3.75ಲಕ್ಷ) ನೀಡಲಾಗುತ್ತಿದೆ.

11) **ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:** ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕರೂ. 6000/-ಗಳ ನಗದನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು. ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಎಲ್ಲಾ ಅರ್ಹ ರೈತರಿಗೆ ದಿನಾಂಕ 14.08.2019 ರಿಂದ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ರೂ.4000/ಗಳನ್ನು ಎರಡು ಕಂತುಗಳಲ್ಲಿ ಆರ್ಥಿಕ ನೆರವನ್ನು ಪಿ.ಎಂ.ಕಿಸಾನ್-ಕರ್ನಾಟಕ ಯೋಜನೆಯಡಿ ನೀಡಲಾಗುತ್ತಿದೆ.

12) **ಕೃಷಿ ಪ್ರಶಸ್ತಿ/ ಕೃಷಿ ಪಂಡಿತ ಪ್ರಶಸ್ತಿ:** ರಾಜ್ಯದ ರೈತರಲ್ಲಿ ಹೆಚ್ಚಿನ ಉತ್ಪಾದನೆ ಮಾಡುವ ಮನೋಭಾವ ಉಂಟು ಮಾಡಲು ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನಗಳನ್ನು (ಕೃಷಿ ಪ್ರಶಸ್ತಿ) ನೀಡಲಾಗುವುದು. ಕೃಷಿ ಕ್ಷೇತ್ರದಲ್ಲಿ ಅಮೂಲ್ಯ ಅನ್ವೇಷಣೆ ಹಾಗೂ ಸೃಜನಾತ್ಮಕ ಕಾರ್ಯಗಳನ್ನು ಕೈಗೊಂಡ ರೈತರನ್ನು ಗುರುತಿಸಿ ಕೃಷಿ ಪಂಡಿತ ಪ್ರಶಸ್ತಿಯನ್ನು ನೀಡಲಾಗುವುದು.

**ವಿಧಾನ ಪರಿಷತ್ತಿನ ಪ್ರಶ್ನೆ ಸಂಖ್ಯೆ 316ರ ಅನುಬಂಧ-3**

**ವಿದ್ಯಾವಂತ ಯುವ ಜನತೆ ಹೆಚ್ಚು ಹೆಚ್ಚಾಗಿ ಕೃಷಿಯತ್ತ ಹೊರಳುವಂತೆ ಮಾಡಲು ಕೃಷಿ ಇಲಾಖೆ ರೂಪಿಸಿರುವ ವಿವಿಧ ಕಾರ್ಯಕ್ರಮಗಳ ವಿವರ**

1. **ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ :** ಈ ಕಾರ್ಯಕ್ರಮದಡಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹಾಗೂ ಕೃಷಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುವುದು (ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90) ಸಣ್ಣ ಟ್ರ್ಯಾಕ್ಟರ್ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರುಗಳಿಗೆ ರೂ.3.00ಲಕ್ಷ ಸಹಾಯಧನ ನೀಡಲಾಗುವುದು. ಕೃಷಿ ಸಂಸ್ಕರಣೆ ಘಟಕಗಳು ಮತ್ತು ಟಾರ್ಪಾಲೀನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರ ಸಹಾಯಧನವನ್ನು ನೀಡಲಾಗುತ್ತಿದೆ.
2. **ಕೃಷಿ ಯಂತ್ರಧಾರೆ:** ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ, ಕಡಿಮೆ ಬಾಡಿಗೆ ದರದಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದ ಮೇಲೆ ಉಪಯೋಗಿಸಲು ಅವಕಾಶ ಕಲ್ಪಿಸಲು ಹೋಬಳಿ ಕೇಂದ್ರಗಳಲ್ಲಿ ಆಯ್ದ ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಯಂತ್ರಧಾರೆ (ಕೃಷಿ ಯಂತ್ರೋಪಕರಣ ಬಾಡಿಗೆ ಆಧಾರಿತ ಸೇವಾ) ಕೇಂದ್ರಗಳನ್ನು ತೆರೆಯಲಾಗಿರುತ್ತದೆ.
3. **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಹಾಗೂ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.
4. **ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ ಯೋಜನೆಯಡಿ ಮಣ್ಣು ಆರೋಗ್ಯ ನಿರ್ವಹಣೆ** ಯೋಜನೆಯಡಿ ಗ್ರಾಮ ಮಟ್ಟದಲ್ಲಿ ಮಣ್ಣು ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಲು (Village level soil testing Lab) ಸ್ಥಾಪಿಸಲು ಆರ್ಥಿಕ ಸಹಾಯವನ್ನು ನೀಡಲಾಗುತ್ತದೆ. ಪ್ರಯೋಗಾಲಯದ ಒಟ್ಟು ವೆಚ್ಚ ರೂ. 5.00 ಲಕ್ಷಗಳಾಗಿದ್ದು. ಫಲಾನುಭವಿಗಳಿಗೆ ಯೋಜನಾ ವೆಚ್ಚದ ಶೇ.75.00ರಷ್ಟು ಆರ್ಥಿಕ ಸಹಾಯವನ್ನು ಸಬ್ಸಿಡಿಯನ್ನಾಗಿ ನೀಡಲಾಗುತ್ತದೆ. ಉಳಿದ ಶೇ. 25.00ರಷ್ಟು ಯೋಜನಾ ವೆಚ್ಚವನ್ನು ಫಲಾನುಭವಿಗಳು ಭರಿಸಬೇಕಿರುತ್ತದೆ. ಮಣ್ಣು ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಲು ಕೃಷಿ ಕ್ಲಿನಿಕ್ ಮತ್ತು ಕೃಷಿ ವ್ಯಾಪಾರ ಕೇಂದ್ರಗಳು ( Agri Clinics & Agri Business Centres), ಕೃಷಿ ಉದ್ದಿಮೆದಾರರು, ಮಾಜಿ ಯೋಧರು,ಸ್ವಸಹಾಯ ಸಂಘಗಳು, ರೈತರ ಉತ್ಪಾದಕರ ಸಂಸ್ಥೆಗಳು (FPOs), ರೈತ ಉತ್ಪನ್ನ ಕಂಪನಿಗಳು, ರೈತರ ಜಂಟಿ ಜವಾಬ್ದಾರಿ ಗುಂಪುಗಳು (Farmer Joint Liability Groups), ರೈತರ ಸಹಕಾರ ಸಂಘಗಳು, PACs , ಪರಿಕರಗಳ ರಿಟೇಲ್ ಔಟ್‌ಲೆಟ್‌ಗಳು, ಪರಿಕರಗಳ ರಿಟೇಲ್‌ದಾರರು, ಶಾಲೆಗಳು / ಕಾಲೇಜುಗಳಿಗೆ ಆರ್ಥಿಕ ಸಹಾಯವನ್ನು ನೀಡಲಾಗುವುದು. ಫಲಾನುಭವಿಗಳು ಕನಿಷ್ಠ ಪಕ್ಷ ಮೆಟ್ರಿಕ್ ನಲ್ಲಿ 2ನೇ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು. ವಿಜ್ಞಾನ ಮತ್ತು ಗಣಕಯಂತ್ರದ ಜ್ಞಾನ ಹೊಂದಿರಬೇಕು.

5. **ಚಿಲ್ಲರೆ ಗೊಬ್ಬರ ಮಾರಾಟ ಪರವಾನಗಿ ವಿತರಣೆ:** ಯುವ ಜನತೆ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುವ ನಿಟ್ಟಿನಲ್ಲಿ 2016ನೇ ಸಾಲಿನಿಂದ ಚಿಲ್ಲರೆ ಮಾರಾಟಗಾರರಿಗಾಗಿ ಪರವಾನಗಿ ನೀಡಲು ರಸಗೊಬ್ಬರ ನಿಯಂತ್ರಣ ಆದೇಶ 1985ರ ಪ್ರಕಾರ ಅರ್ಜಿದಾರರು ಯಾವುದೇ ರಾಜ್ಯ ಕೃಷಿ ವಿಶ್ವ ವಿದ್ಯಾಲಯ ಅಥವಾ ಕೃಷಿ ವಿಜ್ಞಾನ ಕೇಂದ್ರಗಳು ಅಥವಾ ರಾಷ್ಟ್ರೀಯ ಕೃಷಿ ವಿಸ್ತರಣೆ ನಿರ್ವಹಣೆ ಸಂಸ್ಥೆ (Manage) ಅಥವಾ ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ಸಂಸ್ಥೆಗಳಿಂದ ಕೃಷಿ ವಿಷಯಕ್ಕೆ ಸಂಬಂಧಿಸಿದಂತೆ ಹದಿನೈದು ದಿನಗಳ ಪ್ರಮಾಣ ಪತ್ರ ಕೋರ್ಸ್ ಹೊಂದಿದವರಿಗೆ ಮಾತ್ರ ಚಿಲ್ಲರೆ ಮಾರಾಟ ಪರವಾನಗಿ ನೀಡಲಾಗುತ್ತಿದೆ.
6. **ರಾಷ್ಟ್ರೀಯ ಆಹಾರ ಭದ್ರತಾ ಯೋಜನೆ:** ಯುವ ಜನತೆ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುವ ನಿಟ್ಟಿನಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ಭತ್ತ, ದ್ವಿದಳಧಾನ್ಯ, ನ್ಯೂಟ್ರಿ ಸೀರಿಯಲ್ಸ್, ಎಣ್ಣೆಕಾಳುಗಳಲ್ಲಿ ವಿವಿಧ ತಾಂತ್ರಿಕತೆಗಳ ಬಗ್ಗೆ ದೊಡ್ಡ ಪ್ರಮಾಣದ ಪ್ರಾತ್ಯಕ್ಷಿಕೆಗಳನ್ನು ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

****